## 124. ನಿರಂತರ ಉತ್ಪಾದನೆಗೆ ಅನುವು

ಕೊರೊನಾ ಪೀಡಿತ ಕಾಲದಲ್ಲಿ ಲಾಕ್‌ಡೌನ್ ಅವಧಿಯಲ್ಲಿ ಮತ್ತು ಅನಂತರ ಅಗತ್ಯ ವಸ್ತುಗಳೂ ಸೇರಿದಂತೆ ಎಲ್ಲ ರೀತಿಯ ಉತ್ಪಾದನೆಗಳು ನಿರಂತರವಾಗಿ ನಡೆಯಲು ಅನುವು ಮಾಡಿಕೊಡಲಾಗುತ್ತಿರುವುದು ಕರ್ನಾಟಕ ಮಾತ್ರ ಎಂದು ಕೈಗಾರಿಕಾ ಸಚಿವ ಜಗದೀಶ್ ಶೆಟ್ಟರ್ ಹೇಳಿದರು. ಪ್ರಸಕ್ತ 2020ರ ಮಧ್ಯಮ ಮತ್ತು ಸಣ್ಣ ಕೈಗಾರಿಕಾ ದಿನಾಚರಣೆ ಸಮಾರಂಭದಲ್ಲಿ ಉದ್ಯಮಿಗಳ ನೆರವಿಗಾಗಿ ಕೋವಿಡ್–19 ಸಹಾಯವಾಣಿಯನ್ನು ಪ್ರಾರಂಭಿಸುವ ಕಾರ್ಯಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಹೊಸದಾಗಿ ಉದ್ಯಮ ಪ್ರಾರಂಭಿಸುವವರ ಹಾದಿ ಸರಳಗೊಳಿಸುವ ಸಲುವಾಗಿ ಹಲವು ಕ್ರಮಗಳನ್ನು ಕೈಗೊಳ್ಳಲಾಗಿದ್ದು, ಉದ್ದಿಮೆದಾರರು ಈಗ ಮೊದಲಿನಂತೆ ತೊಂದರೆ ಪಡಬೇಕಿಲ್ಲ. ಜೊತೆಗೆ ಕೃಷಿಕರಲ್ಲದವರಿಗೂ ಸಹ ಭೂಮಿ ಖರೀದಿಸಲು ಅವಕಾಶ ಮಾಡಿಕೊಡುವ ನಿಟ್ಟಿನಲ್ಲಿ ಭೂ ಸುಧಾರಣಾ ಕಾಯಿದೆಗೆ ತಿದ್ದುಪಡಿ ತಂದಿರುವುದು ಕರ್ನಾಟಕದ ಕೈಗಾರಿಕಾ ವಲಯದಲ್ಲಿ ಮಹತ್ವದ ಬೆಳವಣಿಗೆಯಾಗಿದೆ ಎಂದು ತಿಳಿಸಿದರು. ಸಹಾಯವಾಣಿಯ ನಿರ್ಮಾಣಕಾರ್ಯಕ್ಕೆ ಚಾಲನೆ ನೀಡಲಾಗಿದ್ದು, ಪೀಣ್ಯ, ಬೆಂಗಳೂರಿನ ಕಾಸಿಯಾ ಮತ್ತು ಮೈಸೂರಿನಿಂದ ಏಕಕಾಲದಲ್ಲಿ ಕಾರ್ಯನಿರ್ವಹಿಸಲಿದೆ.

ಆಧಾರ:ಸಂಯುಕ್ತ ಕರ್ನಾಟಕ, ದಿನಾಂಕ:29.06.2020